ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಜನವರಿ 6, 2016

## ಮಾಜಿ ಸಚಿವ ಹೆಚ್. ಜಿ. ಗೋವಿಂದೇ ಗೌಡ ಅವರ ನಿಧನಕ್ಕೆ ಮುಖ್ಯಮಂತ್ರಿ ಸಂತಾಪ

**ಬೆಂಗಳೂರು, ಜನವರಿ 6 :**

ಮಲೆನಾಡ ಗಾಂಧೀ ಎಂದೇ ಜನಪ್ರಿಯರಾಗಿದ್ದ ಹಿರಿಯ ಸ್ವಾತಂತ್ರ್ಯ ಹೋರಾಟಗಾರ ಹಾಗೂ ರಾಜ್ಯದ ಮಾಜಿ ಸಚಿವ ಶ್ರೀ ಹೆಚ್. ಜಿ. ಗೋವಿಂದೇ ಗೌಡ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾಗಿದ್ದ ಶ್ರೀ ಹೆಚ್. ಜಿ. ಗೋವಿಂದೇ ಗೌಡ ಅವರು ತಮ್ಮ ಅಧಿಕಾರಾವಧಿಯಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಶಿಕ್ಷಕರನ್ನು ಪ್ರತಿಭೆಯ ಆಧಾರದ ಮೇರೆಗೆ ಅತ್ಯಂತ ಪ್ರಾಮಾಣಿಕವಾಗಿ ಹಾಗೂ ಪಾರದರ್ಶಕವಾಗಿ ನೇಮಕ ಮಾಡಿ, ರಾಜ್ಯ ಶಿಕ್ಷಣ ರಂಗದಲ್ಲಿ ಕ್ರಾಂತಿಯನ್ನು ಉಂಟು ಮಾಡಿದ್ದರು. ಅಲ್ಲದೆ, ಸರ್ಕಾರಿ ಸೇವೆಗೆ ನೇಮಕಗೊಂಡ ಈ ಎಲ್ಲಾ ಶಿಕ್ಷಕರನ್ನು ಗ್ರಾಮೀಣ ಸೇವೆಗೆ ಕಡ್ಡಾಯವಾಗಿ ನಿಯುಕ್ತಿಗೊಳಿಸುವಲ್ಲಿ ಯಶಸ್ವಿಯಾಗಿದ್ದರು. ಶಿಕ್ಷಕರ ಸಮಸ್ಯೆಗಳಿಗೆ ಜಿಲ್ಲಾ ಮಟ್ಟದಲ್ಲೇ ಪರಿಹಾರ ದೊರಕಿಸಿಕೊಡುವಲ್ಲಿ ಹೊಸ ಸೂತ್ರ ರೂಪಿಸಿದ್ದರು. ಶ್ರೀ ಹೆಚ್. ಜಿ. ಗೋವಿಂದೇ ಗೌಡ ಅವರು ಸರಳ, ಸಜ್ಜನ ಹಾಗೂ ಸಂಭಾವಿತ ರಾಜಕಾರಣಿ ಎಂದು ಶ್ರೀ ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ನಮ್ಮನ್ನಗಲಿರುವ ಈ ಹಿರಿಯ ಚೇತನ ಶ್ರೀ ಗೋವಿಂದೇ ಗೌಡ ಅವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಹಾಗೂ ಶ್ರೀಯುತರ ಅಗಲಿಕೆಯಿಂದ ಉಂಟಾದ ದುಃಖವನ್ನು ಭರಿಸಲು ಅವರ ಕುಟುಂಬದ ಸದಸ್ಯರು ಮತ್ತು ಅಪಾರ ಅಭಿಮಾನಿ ವರ್ಗಕ್ಕೆ ಶಕ್ತಿಯನ್ನು ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

*********

ಡಿ ಪಿ ಎಂ